b) 1550 Ashraya houses are sanctioned for the year 2008-09. Out of this 1540 beneficiaries have been selected, 1107 houses completed and 335 houses are under progress.

ವಿಜಾಪುರದಲ್ಲಿ ನಗರ ಸಾರಿಗೆ ಬಸ್ ನಿಲ್ದಾಣ ನಿರ್ಮಾಣ

817 (565) ಶ್ರೀ ಅಪ್ಪಾಸಾಹೇಬ (ಅಪ್ಪು) ಮಲ್ಲಪ್ಪ ಪಟ್ಟಣಶೆಟ್ಟಿ (ಬಿಜಾಪುರ ನಗರ) : ಮಾನ್ಯ ಗೃಹ ಮತ್ತು ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಜಿಲ್ಲಾ ಕೇಂದ್ರವಾಗಿರುವ ಬಿಜಾಪುರದಲ್ಲಿ ನಗರ ಸಾರಿಗೆ ಬಸ್‌ಗಳಿಗೆ ಪ್ರತ್ಯೇಕ ಬಸ್ ನಿಲ್ದಾಣ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಅಲ್ಲದೇ ನಗರವು ಐತಿಹಾಸಿಕ ಹಿನ್ನಲೆಯುಳ್ಳ ಪ್ರವಾಸಿ ತಾಣವಾಗಿದ್ದು, ಪ್ರತಿದಿನ ದೇಶೀಯ ಹಾಗೂ ವಿದೇಶಿ ಪ್ರವಾಸಿಗರು ಬರುತ್ತಿರುವುದನ್ನು ಗಮನಿಸಿದೆಯೇ;

ಇ) ಈಗ ಇರುವ ಕೇಂದ್ರ ಬಸ್ ನಿಲ್ದಾಣದಲ್ಲಿ ಬಸ್‌ಗಳಿಗೆ ಸ್ಥಳಾವಕಾಶವಿಲ್ಲದೇ ಸಂಚಾರಕ್ಕೆ ಮತ್ತು ಪ್ರಯಾಣಿಕರಿಗೆ ತೊಂದರೆಯಾಗಿರುವುದನ್ನು ಸರ್ಕಾರ ಗಮನಿಸಿದೆಯೇ;

ಈ) ಹಾಗಿದ್ದರೆ, ಬಿಜಾಪುರದಲ್ಲಿ ನಗರ ಸಾರಿಗೆ ಬಸ್ ನಿಲ್ದಾಣ ನಿರ್ಮಿಸುವ ಪ್ರಸ್ತಾವನೆಯನ್ನು ಸರ್ಕಾರ ಯೋಜಿಸಿದೆಯೇ;

ಉ) ಹಾಗಿದ್ದಲ್ಲಿ, ಯಾವಾಗ ಮಂಜೂರಾತಿ ನೀಡಲಾಗುವುದು ಅದಕ್ಕಾಗಿ ಸರ್ಕಾರ ಕೈಗೊಂಡಿರುವ ಕ್ರಮಗಳೇನು?

ಶ್ರೀ ಆರ್. ಅಶೋಕ (ಗೃಹ ಮತ್ತು ಸಾರಿಗೆ ಸಚಿವರು) :

ಅ) ಹೌದು.

ಆ) ಹೌದು.

ಇ) ಈ ಹಿಂದೆ ವಿಜಾಪುರ ನಗರದಲ್ಲಿ ಶಿಥಿಲಾವಸ್ಥೆಯಲ್ಲಿದ್ದ ಹಳೆಯ ಬಸ್ ನಿಲ್ದಾಣ ಹಾಗೂ ಅದಕ್ಕೆ ಹೊಂದಿಕೊಂಡ ಬಸ್ ಘಟಕವನ್ನು ಒಡೆದು ಹಾಕಿ, 7 ಎಕರೆ ನಿವೇಶನದಲ್ಲಿ ಸುಸಜ್ಜಿತವಾದ ನೂತನ ಬಸ್ ನಿಲ್ದಾಣ ನಿರ್ಮಿಸಲಾಗಿರುತ್ತದೆ. ಪ್ರಸ್ತುತ ಬಸ್ ನಿಲ್ದಾಣದಲ್ಲಿ ಬಸ್‌ಗಳ

ಸಂಚಾರಕ್ಕೆ ಸ್ಥಳಾವಕಾಶದ ಕೊರತೆ ಇರುವುದಿಲ್ಲ. ಇದರಿಂದ ಪ್ರಯಾಣಿಕರಿಗೆ ಯಾವುದೇ ತೊಂದರೆಯಾಗುತ್ತಿರುವುದಿಲ್ಲ.

ಈ) ವಿಜಾಪುರ ನಗರದಲ್ಲಿ ನಗರ ಸಾರಿಗೆ ಬಸ್ ನಿಲ್ದಾಣ ನಿರ್ಮಾಣ ಮಾಡಲು ಪ್ರಸ್ತುತ ಸಂಸ್ಥೆಯ ವಶದಲ್ಲಿ ನಿವೇಶನ ಲಭ್ಯವಿರುವುದಿಲ್ಲ. ನಗರ ಸಾರಿಗೆ ಬಸ್ ನಿಲ್ದಾಣಕ್ಕೆ ಸೂಕ್ತ ನಿವೇಶನ ಲಭ್ಯವಾದಲ್ಲಿ, ನಗರ ಸಾರಿಗೆ ವಾಹನಗಳ ಕಾರ್ಯಾಚರಣೆಗೆ ಪ್ರತ್ಯೇಕ ಬಸ್ ನಿಲ್ದಾಣ ನಿರ್ಮಾಣ ಮಾಡುವುದರ ಬಗ್ಗೆ ಪರಿಶೀಲಿಸಿ ಕ್ರಮ ಕೈಗೊಳ್ಳಲಾಗುವುದು.

ಉ) ಬಸ್ ನಿಲ್ದಾಣಕ್ಕೆ ಜಮೀನು ಲಭ್ಯವಾದ ನಂತರ ಪರಿಸೀಲಿಸಿ ಕ್ರಮ ಕೈಗೊಳ್ಳಲಾಗುವುದು.

ವೈದ್ಯಕೀಯ ಶಿಕ್ಷಣ ಇಲಾಖೆಯಲ್ಲಿನ ಅವ್ಯವಹಾರಗಳು

818 (1149) ಶ್ರೀ ಅಪ್ಪಾ ಸಾಹೇಬ (ಅಪ್ಪು) ಮಲ್ಲಪ್ಪ ಪಟ್ಟಣಶೆಟ್ಟಿ (ಬಿಜಾಪುರ ನಗರ) : ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಎಂ.ಬಿ.ಬಿ.ಎಸ್. ಹಾಗೂ ಎಂ.ಡಿ. ಮೊದಲಾದ ಪದವಿ ಹಾಗೂ ಸ್ನಾತಕೋತ್ತರ ಕೋರ್ಸ್‌ಗಳ ಪ್ರವೇಶಕ್ಕೆ ಮಧ್ಯವರ್ತಿಗಳು/ ಏಜೆಂಟರ ಮೂಲಕ ಅವ್ಯವಹಾರ ನಡೆದಿರುವುದನ್ನು ಸರ್ಕಾರ ಗಮನಿಸಿದೆಯೇ;

ಆ) ಗಮನಿಸಿದ್ದಲ್ಲಿ, ಬಡ, ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಅನ್ಯಾಯವಾಗುವುದಿಲ್ಲವೇ;

ಇ) ಅಕ್ರಮದಲ್ಲಿ ಭಾಗಿಯಾದವರ ವಿರುದ್ಧ ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ;

ಈ) ಅಕ್ರಮದಲ್ಲಿ ಭಾಗಿಯಾಗಿದ್ದರ ವಿವರ ನೀಡುವುದು;

ಉ) ಈ ರೀತಿ ಅಕ್ರಮ, ಅವ್ಯವಹಾರಗಳು ನಡೆಯದಂತೆ ಮುಂಜಾಗ್ರತಾ ಕ್ರಮವಾಗಿ ಯಾವ ಕಠಿಣ ಕ್ರಮಗಳನ್ನು ಸರ್ಕಾರ ಕೈಗೊಂಡಿದೆ?